ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1170 (1401)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್.ನಾಗರಾಜ್(ಸಂದೇಶ್‌ನಾಗರಾಜ್)(ಸ್ಥಳೀಯಸಂಸ್ಥೆಗಳಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ಧಿ ಸಚಿವರು

ವಿಷಯ : ಮೈಸೂರು ಪುರಭವನದಲ್ಲಿ ವಾಹನ ನಿಲ್ದಾಣ ನಿರ್ಮಾಣದ ಬಗ್ಗೆ

(ಅ) ಮೈಸೂರು ರಂಗಾಚಾರುಲು ಪುರಭವನದ ಆವರಣದಲ್ಲಿ ನೆಲಮಹಡಿ ವಾಹನ ನಿಲುಗಡೆ ನಿರ್ಮಾಣ ಕಾಮಗಾರಿ ಕಳೆದ ಹತ್ತು ವರ್ಷಗಳಿಂದ ನೆನೆಗುದಿಗೆ ಬೀಳಲು ಕಾರಣಗಳೇನು ; ಈ ಯೋಜನೆಯ ರೂಪುರೇಷೆಗಳೇನು ; ನಿರ್ಮಾಣ ಕಾಮಗಾರಿಯ ಅಂದಾಜು ವೆಚ್ಚ ಎಷ್ಟು ;

(ಆ) ಈ ಕಾಮಗಾರಿಯನ್ನು ಪುನರ್ ಪರಿಶೀಲಿಸಿ, ಹೊಸದಾಗಿ ಅಂದಾಜು ಸಿದ್ಧಪಡಿಸಿ, ಪುನಃ ಟೆಂಡರ್ ಕರೆಯಲು ಕ್ರಮ ತೆಗೆದುಕೊಳ್ಳಲಾಗಿದೆಯೇ; ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ಯಾವಾಗ ;

(ಇ) ಪುರಭವನದ ಹೊರ ಆವರಣವನ್ನು ಸುಂದರವಾಗಿ ಅಭಿವೃದ್ಧಿಪಡಿಸಲು ಕ್ರಮ ಜರುಗಿಸಲಾಗುವುದೇ ?